# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 140 ಗ್ರಾಪಂಅ 2012

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ: 13-03-2012

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಗ್ರಾಮೀಣ ಅಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
**ಬೆಂಗಳೂರು.**

ಇವರಿಗೆ:

1) ಎಲ್ಲಾ ಜಿಲ್ಲಾ ಪಂಚಾಯತಿಯ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.

2) ಎಲ್ಲಾ ತಾಲ್ಲೂಕು ಪಂಚಾಯತಿಯ
ಕಾರ್ಯನಿರ್ವಾಹಕ ಅಧಿಕಾರಿಗಳು.

ಮಾನ್ಯರೆ,

ವಿಷಯ: ಗ್ರಾಮೀಣ ದಾಸ್ತಾನು ಮಳಿಗೆಗಳನ್ನು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿಗೆ ಹಸ್ತಾಂತರಿಸುವ ಬಗ್ಗೆ.

ಉಲ್ಲೇಖ: ಸಹಕಾರ ಇಲಾಖೆಯ ಆದೇಶ ಸಂಖ್ಯೆ: ಸಇ 278 ಎಂಆರ್ಇ 2011 ದಿನಾಂಕ: 07-12-2011 ಮತ್ತು ತಿದ್ದುಪಡಿ ದಿನಾಂಕ: 27-12-2011

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಕಾರ ಇಲಾಖೆಯು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳು ಕೃಷಿ ಉತ್ಪನ್ನಗಳ ಸಂಗ್ರಹಣೆಗಳಿಗಾಗಿ ವಿವಿಧ ಯೋಜನೆಗಳಡಿ ಗ್ರಾಮೀಣ ದಾಸ್ತಾನು ಮಳಿಗೆಗಳನ್ನು ನಿರ್ಮಿಸಿ ನಿರ್ವಹಣೆಗಾಗಿ ಗ್ರಾಮ ಪಂಚಾಯತಿಗಳಿಗೆ ನೀಡಲಾಗಿದ್ದುದನ್ನು ಹಿಂಪಡೆದು ಸದರಿ ದಾಸ್ತಾನು ಮಳಿಗೆಗಳ ಯಶಸ್ವಿ ನಿರ್ವಹಣೆಗಾಗಿ ಗೋದಾಮುಗಳ ನಿರ್ವಹಣೆಯನ್ನು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿಗೆ ವಹಿಸಿ ಉಲ್ಲೇಖಿತ ಆದೇಶದಲ್ಲಿ ಆದೇಶಿಸಿರುತ್ತದೆ.

ಆದಕಾರಣ, ಸಹಕಾರ ಇಲಾಖೆಯು ಹೊರಡಿಸಿರುವ ಆದೇಶದ ಅನ್ವಯ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಿಗೆ ಸೇರಿದ ಹಾಗೂ ನಿರ್ವಹಣೆಗಾಗಿ ಆಯಾ ಗ್ರಾಮ ಪಂಚಾಯತಿಗಳಿಗೆ ನೀಡಿರುವ ಗ್ರಾಮೀಣ ಗೋದಾಮುಗಳನ್ನು ಕೂಡಲೇ ಆಯಾ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿಗೆ ಹಸ್ತಾಂತರಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

**(ಹೆಚ್.ಬಿ. ರಘುನಾಥ್)**
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ